# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 179 |
| ಸದಸ್ಯರ ಹೆಸರು | : | ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |
| ಉತ್ತರಿಸುವ ದಿನಾಂಕ | : | 13.09.2022 |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳ ಅಭಿವೃದ್ಧಿಗಾಗಿ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳಾವುವು; (ಸಂಪೂರ್ಣ ವಿವರಗಳನ್ನು ಒದಗಿಸುವುದು) | ಮಾಹಿತಿಯನ್ನು ಅನುಬಂಧ-1ರಲ್ಲಿ ಲಗತ್ತಿಸಿದೆ. |
| ಆ) | ಕಳೆದ ಐದು ವರ್ಷಗಳಿಂದ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆಯಿಂದ ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ ಹಾಗೂ ಎಷ್ಟು ಅನುದಾವನ್ನು ಬಿಡುಗಡೆಗೊಳಿಸಲಾಗಿದೆ; ಬಿಡುಗಡೆಗೊಳಿಸಿರುವ ಅನುದಾನದಲ್ಲಿ, ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು) | ಮಾಹಿತಿಯನ್ನು ಅನುಬಂಧ-2ರಲ್ಲಿ ಲಗತ್ತಿಸಿದೆ. |

**ಸಂಖ್ಯೆ:ಮಮಇ 268 ಐಸಿಡಿ 2022**

Halappa

**(ಆಚಾರ್ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ
ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು.

## ಅನುಬಂಧ-1

### ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳ ಅಭಿವೃದ್ಧಿಗಾಗಿ ಇಲಾಖೆ ವತಿಯಿಂದ ತೆಗೆದುಕೊಂಡಿರುವ ಕ್ರಮಗಳು

ಅಂಗನವಾಡಿ ಕೇಂದ್ರಗಳಲ್ಲಿ ಗರ್ಭಿಣಿ / ಬಾಣಂತಿಯರಿಗೆ ಮಾತೃಪೂರ್ಣ ಯೋಜನೆಯಡಿ ಪ್ರತಿ ಫಲಾನುಭವಿಗೆ ರೂ.21/- ರ ಘಟಕ ವೆಚ್ಚದಲ್ಲಿ ಮಧ್ಯಾಹ್ನದ ಬಿಸಿಯೂಟವನ್ನು ನೀಡಲಾಗುತ್ತಿದ್ದು, ಇದರಲ್ಲಿ, ಅನ್ನ, ಸಾಂಬಾರ್, ಪಲ್ಯ, ಮೊಟ್ಟೆ, ಹಾಲು, ಶೇಂಗಾಚಿಕ್ಕಿ ಒಳಗೊಂಡಿರುತ್ತದೆ. ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ಆಹಾರ ಪದಾರ್ಥಗಳನ್ನು ಫಲಾನುಭವಿಗಳ ಮನೆಗೆ ನೀಡಲಾಗುತ್ತಿದೆ.

- ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿ ದಿನ ರೂ.8.00 ಮೌಲ್ಯದ ಪೂರಕ ಪೌಷ್ಟಿಕ ಆಹಾರವನ್ನು ನೀಡಲಾಗುತ್ತಿದೆ.
- ತೀವ್ರ ಅಪೌಷ್ಟಿಕ ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಟಿಕ ಆಹಾರವನ್ನು ನೀಡಲಾಗುತ್ತಿದೆ.
- ಅಂಗನವಾಡಿಗೆ ಹಾಜರಾಗುವ 3 ವರ್ಷದಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆಯನ್ನು ನೀಡಲಾಗುತ್ತಿದೆ.
- ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 10 ಗ್ರಾಂ ಸಕ್ಕರೆ) ನೀಡಲಾಗುತ್ತಿದೆ.
- 6 ತಿಂಗಳಿಂದ 3 ವರ್ಷದ ತೀವ್ರ ಅಪೌಷ್ಟಿಕ ಮಕ್ಕಳಿಗೆ ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.
- 3 ವರ್ಷದಿಂದ 6 ವರ್ಷದ ತೀವ್ರ ಅಪೌಷ್ಟಿಕ ಮಕ್ಕಳಿಗೆ ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.
- ತೀವ್ರ ಅಪೌಷ್ಟಿಕ ಮಕ್ಕಳಿಗೆ ಆರೋಗ್ಯ ಇಲಾಖೆಯ ಪೌಷ್ಟಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.
- ಆರೋಗ್ಯ ಮತ್ತು ಪೌಷ್ಟಿಕ ಶಿಬಿರಗಳನ್ನು ಏರ್ಪಡಿಸಿ ಅಧಿಕ ಪೌಷ್ಟಿಕತೆಯುಳ್ಳ ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಟಿಕತೆಯುಳ್ಳ ಆಹಾರವನ್ನು ನೀಡಲು ತಿಳುವಳಿಕೆ ನೀಡಲಾಗುತ್ತದೆ.
- ಪ್ರತಿ ತಿಂಗಳು ನಡೆಸುವ ತಾಯಂದಿರ ಸಭೆಗಳಲ್ಲಿ ಅಪೌಷ್ಟಿಕತೆ ನಿವಾರಣೆ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ತಾಯಂದಿರುಗಳಿಗೆ ತಿಳುವಳಿಕೆ ನೀಡಲಾಗುತ್ತದೆ.
- ಪೋಷಣ್ ಅಭಿಯಾನ ಯೋಜನೆಯಡಿ ಪ್ರತೀ ತಿಂಗಳು ಎರಡು ಬಾರಿ ಸಮುದಾಯ ಆಧಾರಿತ ಚಟುವಟಿಕೆಗಳನ್ನು ನಡೆಸಲಾಗುತ್ತಿದ್ದು, ತಾಯಂದಿರಿಗೆ ಅಪೌಷ್ಟಿಕತೆ ಬಗ್ಗೆ ತಿಳಿಸಲಾಗುತ್ತಿದೆ.
- ಅಂಗನವಾಡಿ ಕೇಂದ್ರಗಳಲ್ಲಿ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆಯನ್ನು 3 ತಿಂಗಳಿಗೊಮ್ಮೆ ನಡೆಸಲಾಗುತ್ತಿದೆ.

ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಬೆಂಗಳೂರು.

ಅನುಬಂಧ-2

ಕಳೆದ ಐದು ವರ್ಷಗಳಿಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಕೈಗೊಳ್ಳಲಾಗುತ್ತಿರುವ ಕಾರ್ಯಕ್ರಮಗಳು ಹಾಗೂ ಬಿಡುಗಡೆಗೊಳಿಸಿರುವ ಅನುದಾನ ಮತ್ತು ಬಿಡುಗಡೆಗೊಳಿಸಿರುವ ಅನುದಾನದಲ್ಲಿ ಕೈಗೊಳ್ಳಲಾಗಿರುವ ಕ್ರಮದ ಮಾಹಿತಿ

| ಕ್ರ. ಸಂ. | ಇಲಾಖೆಯಿಂದ ಕೈಗೊಂಡಿರುವ ವಿವಿಧ ಕಾರ್ಯಕ್ರಮಗಳು | ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಖರ್ಚಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಬಿಡುಗಡೆಗೊಳಿಸಿರುವ ಅನುದಾನದಲ್ಲಿ ಕೈಗೊಳ್ಳಲಾದ ಕ್ರಮದ ಮಾಹಿತಿ |
|---|---|---|---|---|---|---|---|---|---|---|---|---|
| | | 2017-18 | 2018-19 | 2019-20 | 2020-21 | 2021-22 | 2017-18 | 2018-19 | 2019-20 | 2020-21 | 2021-22 | |
| 1 | ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ ತರಬೇತಿ (CSS)(60 40) 2235-02-102-0-05 | 535.00 | 400.00 | 465.39 | 299.17 | 301.00 | 534.54 | 397.14 | 465.39 | 204.59 | 0.00 | ಸದರಿ ಕಾರ್ಯಕ್ರಮದಡಿ ಪ್ರತಿ ಆರ್ಥಿಕ ವರ್ಷದಲ್ಲಿ ಹಂಚಿಕೆಯಾಗುವ ಅನುದಾನಕ್ಕೆ ಅನುಗುಣವಾಗಿ ಬಿಡುಗಡೆಯಾದ ಮೊತ್ತಕ್ಕೆ ಅನುಗುಣವಾಗಿ ವೆಚ್ಚವನ್ನು ಭರಿಸಲಾಗಿರುತ್ತದೆ. |
| 2 | ಉದ್ಯೋಗಿ ಮಾತೆಯರ ಮಕ್ಕಳಿಗಾಗಿ ಶಿಶುವಿಹಾರಗಳು (CSS:SS-60:40) 2235-02-102-0-13 | 377.29 | 0.00 | 1105.98 | 636.00 | 426.65 | 256.52 | 0.00 | 962.99 | 590.37 | 401.01 | ರಾಷ್ಟ್ರೀಯ ಶಿಶು ಪಾಲನಾ ಕೇಂದ್ರ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಸದರಿ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಪಾಲು ಅನುಕ್ರಮವಾಗಿ 60:30:10 ಅನುಪಾತದಂತೆ ಅನುದಾನವನ್ನು ಒದಗಿಸಲಾಗಿರುತ್ತದೆ. ನವೀಕೃತಗೊಂಡ ಈ ಯೋಜನೆಯು 6 ತಿಂಗಳಿಂದ 3 ವರ್ಷದ ಮಕ್ಕಳಿಗೆ ಪ್ರಾರಂಭಿಕ ಬಾಲ್ಯಾವಸ್ಥೆಯ ಸೇವೆಗಳನ್ನು ನೀಡುವಲ್ಲಿ ಮಹತ್ವಪೂರ್ಣ ಬದಲಾವಣೆಯನ್ನು ತರುವ ಉದ್ದೇಶ ಹೊಂದಿರುತ್ತದೆ. ಉದ್ಯೋಗಸ್ಥ ತಾಯಂದಿರು ತಮ್ಮ ಕೆಲಸದ ಅವಧಿಯಲ್ಲಿ ಮಕ್ಕಳ ಸಮಗ್ರ ಪೋಷಣೆಗಾಗಿ ಶಿಶು ಪಾಲನಾ ಕೇಂದ್ರದಲ್ಲಿ ತಮ್ಮ ಮಕ್ಕಳನ್ನು ಕಳುಹಿಸಲು ಅನುಕೂಲವಾಗುತ್ತದೆ. |
| 3 | ಪೋಷಣ ಅಭಿಯಾನ (ರಾಷ್ಟ್ರೀಯ ಪೌಷ್ಟಿಕಾಂಶ ಅಭಿಯಾನ) 2235-02-102-0-43 | 0.00 | 8757.58 | 12972.15 | 6396.45 | 991.31 | 0.00 | 8757.58 | 6575.69 | 5821.28 | 991.31 | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಫಲಾನುಭವಿಗಳ ಗುರಿಯನ್ನಾಧರಿಸಿ ಎಲ್ಲಾ ಪೌಷ್ಟಿಕತೆಯ ಯೋಜನೆಗಳನ್ನು ಒಗ್ಗೂಡಿಸುವ ಯೋಜನೆಯಾಗಿದೆ. ಮುಖ್ಯವಾಗಿ 0-6 ವರ್ಷದ ಮಕ್ಕಳು, ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರ ಪೌಷ್ಟಿಕತೆಯ ಸ್ಥಿತಿಯನ್ನು ನಿರ್ಧಿಷ್ಟ ಅವಧಿಗೆ ಅನುಗುಣವಾಗಿ ಸುಧಾರಿಸುವುದು ಈ ಯೋಜನೆಯ ಮುಖ್ಯವಾದ ಗುರಿಯಾಗಿದೆ. 8ನೇ ಮಾರ್ಚ್ ?018ಕ್ಕೆ ಪ್ರಾರಂಭವಾಗಿರುವ ಈ ಯೋಜನೆಯನ್ನು ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯಡಿ ವಿವಿಧ ಇಲಾಖೆಗಳ ನಡುವೆ ಸಮನ್ವಯತೆ ತರುವ ಮೂಲಕ ಪೌಷ್ಟಿಕತೆ ವಿಷಯದಲ್ಲಿ ಸಮಗ್ರವಾದ ಬದಲಾವಣೆ ದೂರದೃಷ್ಟಿಯನ್ನು ಹೊಂದಲಾಗಿದೆ. |
| 4 | ಪ್ರಾಯಪೂರ್ವ ಬಾಲಕಿಯರ ಸಬಲೀಕರಣ ರಾಜೀವ್ ಗಾಂಧಿ ಯೋಜನೆ (ಸಬಲ) ಪೌಷ್ಟಿಕಾಂಶ (CSS: SS - 50:50) & ಪೌಷ್ಟಿಕೇತರಾಂಶ (CSS: SS - 60:40) 2235-02-103-0-46 | 145.84 | 44.37 | 200.00 | 40.62 | 0.00 | 109.73 | 12.66 | 75.27 | 15.55 | 0.00 | (1) ಸದರಿ ಯೋಜನೆಯಡಿ 11-14 ವರ್ಷದ ಶಾಲೆಯಿಂದ ಹೊರಗುಳಿದ ಪ್ರಾಯಪೂರ್ವ ಬಾಲಕಿಯರನ್ನು ಫಲಾನುಭವಿಗಳೆಂದು ಗುರುತಿಸಲಾಗುತ್ತದೆ. (2) ಪೂರಕ ಪೌಷ್ಟಿಕ ಆಹಾರ (SNP)ವನ್ನು 11-14 ವರ್ಷದ ಶಾಲೆಯಿಂದ ಹೊರಗೆ ಉಳಿದ ಕಿಶೋರಿಯರಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಕೇಂದ್ರಗಳಲ್ಲಿ ರೂ.9.50/-ರ ಘಟಕ ವೆಚ್ಚದಲ್ಲಿ ಒದಗಿಸಲು ಕೇಂದ್ರ ಸರ್ಕಾರದ ನಿರ್ದೇಶನವಿರುತ್ತದೆ. ಸದರಿ ಕಾರ್ಯಕ್ರಮಕ್ಕಾಗಿ ಕೇಂದ್ರ ಸರ್ಕಾರದ ಪಾಲು 50% ಹಾಗೂ ರಾಜ್ಯ ಸರ್ಕಾರದ ಪಾಲು 50% ರ ಅನುಪಾತದಲ್ಲಿ ವೆಚ್ಚ ಭರಿಸಲಾಗುತ್ತಿದೆ. (3) ಎಲ್ಲಾ ಪೌಷ್ಟಿಕೇತರ ಅಂಶದಡಿ (Non-Nutrition Component) ಕಿಶೋರಿಯರಿಗೆ ಆರೋಗ್ಯ ತಪಾಸಣೆ, ಪೌಷ್ಟಿಕತೆ ಎಲ್ಲಾ ಮತ್ತು ಆರೋಗ್ಯ ಶಿಕ್ಷಣ (NHE) ,ಕುಟುಂಬ ಕಲ್ಯಾಣ, ಮಕ್ಕಳ ಪಾಲನೆ, ಗೃಹ ನಿರ್ವಹಣೆ, ಸಂತಾನೋತ್ಪತಿ ಮತ್ತು ಎಲ್ಲಾ ಲೈಂಗಿಕ ಎಲ್ಲಾ ಆರೋಗ್ಯ, ಜೀವನ ಕೌಶಲ್ಯ ಶಿಕ್ಷಣ, ವೃತ್ತಿಪರ/ಕೌಶಲ್ಯ ಅಭಿವೃದ್ಧಿ ತರಬೇತಿಯನ್ನು ನೀಡಲಾಗುತ್ತದೆ. ಸದರಿ ಎಲ್ಲಾ ಕಾರ್ಯಕ್ರಮಕ್ಕಾಗಿ ಕೇಂದ್ರ ಸರ್ಕಾರದ ಪಾಲು 60% ಹಾಗೂ ರಾಜ್ಯ ಸರ್ಕಾರದ ಪಾಲು 40% ರ ಅನುಪಾತದಲ್ಲಿ ವೆಚ್ಚ ಭರಿಸಲಾಗುತ್ತಿದೆ. |

| ಕ್ರ. ಸಂ. | ಇಲಾಖೆಯಿಂದ ಕೈಗೊಂಡಿರುವ ವಿವಿಧ ಕಾರ್ಯಕ್ರಮಗಳು | ಬಿಡಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಖರ್ಚಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಬಿಡುಗಡೆಗೊಳಿಸಿರುವ ಅನುದಾನದಲ್ಲಿ ಕೈಗೊಳ್ಳಲಾದ ಕ್ರಮದ ಮಾಹಿತಿ |
|---|---|---|---|---|---|---|---|---|---|---|---|---|
| | | 2017-18 | 2018-19 | 2019-20 | 2020-21 | 2021-22 | 2017-18 | 2018-19 | 2019-20 | 2020-21 | 2021-22 | |
| 5 | ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆ (CSS: SS – 60:40) 2235-02-103-0-61-059 | 7917.57 | 6930.71 | 14849.19 | 14277.61 | 19371.07 | 7917.57 | 7228.17 | 22982.74 | 20227.79 | 9870.59 | ಈ ಯೋಜನೆಯು 60:40 ಕೇಂದ್ರ:ರಾಜ್ಯ ಸರ್ಕಾರದ ಧನ ಸಹಾಯ ಯೋಜನೆಯಾಗಿದೆ. ಗರ್ಭಿಣಿ/ಬಾಣಂತಿಯರ ಆರೋಗ್ಯ ಮಟ್ಟವನ್ನು ಸುಧಾರಿಸುವ ನಿಟ್ಟಿನಲ್ಲಿ ಉತ್ತಮ ವಾತಾವರಣವನ್ನು ಸೃಷ್ಟಿಸಲು ನಗದು ರೂಪದಲ್ಲಿ ಪ್ರೋತ್ಸಾಹಧನ ನೀಡಲಾಗುವುದು. ಮೊದಲನೆ ಕಂತು ರೂ.1000/- ಗಳನ್ನು ಗರ್ಭಿಣಿಯಾಗಿ 3 ತಿಂಗಳಲ್ಲಿ, ಎರಡನೇ ಕಂತು ರೂ.2000/- ಗಳನ್ನು ಗರ್ಭಿಣಿಯಾಗಿ 6 ತಿಂಗಳು ಮತ್ತು ಒಂದು ಪ್ರಸವಪೂರ್ವ ಪರೀಕ್ಷೆ ನಂತರ ನೀಡಲಾಗುವುದು. ಮೂರನೇಯ ಕಂತು ರೂ.2000/- ಗಳನ್ನು ಮಗು ಮೊದಲನೇ ಹಂತದ ಚುಚ್ಚುಮದ್ದು ಪಡೆದ ನಂತರ ಒಟ್ಟು 3 ಕಂತುಗಳಲ್ಲಿ ರೂ.5000/- ಗಳ ಹೆರಿಗೆ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿಯ ಖಾತೆಗೆ ಜಮಾ ಮಾಡಲಾಗುವುದು. ಮೇಲ್ಕಂಡ ಫಲಾನುಭವಿಗಳು ಎನ್‌ಆರ್‌ಹೆಚ್‌ಎಮ್ ಅಡಿ ಜನನಿ ಸುರಕ್ಷಾ ಯೋಜನೆಯ ಸೌಲಭ್ಯಕ್ಕೂ ಸಹ ಅರ್ಹರಾಗಿರುತ್ತಾರೆ. |
| 6 | ಸಮಗ್ರ ಶಿಶು ಅಭಿವೃದ್ಧಿ ಯೋಜನೆ (ಜಿಲ್ಲಾ ಘಟಕ) (CSS:SS – 60:40) 2211-00-102-0-02 | 1159.00 | 972.42 | 1462.95 | 1329.02 | 1174.57 | 863.94 | 919.44 | 1094.40 | 1308.34 | 1167.42 | ಆಡಳಿತ ವೆಚ್ಚದ ಅಡಿಯಲ್ಲಿ ಗೌರವಧನ, ಉಸ್ತುವಾರಿ ಮತ್ತು ಮೌಲ್ಯಮಾಪನ, ಅಂಗನವಾಡಿ ಕೇಂದ್ರದ ಕಟ್ಟಡದ ಬಾಡಿಗೆ, ಶಾಲಾ ಪೂರ್ವ ಶಿಕ್ಷಣಕಿಟ್, ಮೆಡಿಸಿನ್ ಕಿಟ್, ಸಮವಸ್ತ್ರ ಖರೀದಿ ಮುಂತಾದ ಖರ್ಚುಗಳನ್ನು ಭರಿಸಲಾಗುತ್ತಿದೆ. ಸದರಿ ವೆಚ್ಚಗಳನ್ನು 60:40 ಅನುಪಾತದಲ್ಲಿ ಅನುಕ್ರಮವಾಗಿ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದಿಂದ ಭರಿಸಲಾಗುತ್ತಿದೆ. ಕೇಂದ್ರ ಸರ್ಕಾರದ ಪತ್ರ ಸಂ:11-36/2016 ಸಿಡಿ-1 ದಿನಾಂಕ: 23-11-2017ರಂತೆ 2018-19ನೇ ಸಾಲಿನ ಡಿಸೆಂಬರ್ ಮಾಹೆಯಿಂದ ಜಿಲ್ಲಾ ಘಟಕದ ನಿರೂಪಣಾಧಿಕಾರಿಗಳು, ಅಂಕಿ ಅಂಶಗಳ ಸಹಾಯಕರು, ಯೋಜನಾ ಕಛೇರಿಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಮೇಲ್ವಿಚಾರಕಿಯರ ವೇತನದ ಬಾಬ್ತು ಕೇಂದ್ರ ಸರ್ಕಾರದ ಪಾಲು 25% ಹಾಗೂ ರಾಜ್ಯ ಸರ್ಕಾರದ ಪಾಲು 75% ಆಗಿರುತ್ತದೆ. ಉಳಿದ ಸಿಬ್ಬಂದಿಗಳ ವೇತನದ ಬಾಬ್ತು ಹಾಗೂ ರಾಜ್ಯ ಐಸಿಡಿಎಸ್ ಘಟಕದ ಸಂಪೂರ್ಣ ವೆಚ್ಚ ರಾಜ್ಯ ಸರ್ಕಾರದ ಭರಿಸುತ್ತಿದೆ. |
| 7 | ಸಮಗ್ರ ಶಿಶು ಅಭಿವೃದ್ಧಿ ಯೋಜನೆ (204 ಶಿಶು ಅಭಿವೃದ್ಧಿ ಯೋಜನೆಯ ಆಡಳಿತ ವೆಚ್ಚ) (2211-00-102-0-22 (TP) CSS:SS - 60:40) | 111145.72 | 125906.32 | 160444.66 | 162224.07 | 162004.81 | 105617.91 | 112323.71 | 143276.12 | 159663.37 | 161378.90 | |
| 8 | ಸಮಗ್ರ ಶಿಶು ಅಭಿವೃದ್ಧಿ ಯೋಜನೆ (H.O. Cell) 2235-02-102-0-04 | 4981.99 | 739.48 | 321.67 | 260.50 | 273.00 | 4948.33 | 314.77 | 214.98 | 209.21 | 218.88 | |
| 9 | ಶಾಲಾ ಪೂರ್ವ ಮಕ್ಕಳ ಊಟದ ಯೋಜನೆ 2235-00-101-0-61 (TP) (CSS: SS - 50:50) | 137793.71 | 191225.53 | 191025.14 | 195276.20 | 195285.30 | 142029.59 | 156487.68 | 147736.28 | 194697.49 | 195214.44 | ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗುವ ಎಲ್ಲಾ ಫಲಾನುಭವಿಗಳಿಗೆ (0-6 ವರ್ಷದ ಒಳಗಿನ ಮಕ್ಕಳು, ಗರ್ಭಿಣಿಯರು, ಬಾಣಂತಿಯರು ಮತ್ತು ಕಿಶೋರಿಯರು) ಈ ಕಾರ್ಯಕ್ರಮದಡಿ ಪೂರಕ ಪೌಷ್ಠಿಕ ಆಹಾರ ಸೌಲಭ್ಯವನ್ನು ನೀಡಲಾಗುವುದು. |
| 10 | ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚಗಳನ್ನು ಭರಿಸುವ ಬಗ್ಗೆ (ಬಾಲಸಂಜೀವಿನಿ) 2235-02-102-0-30 | 380.22 | 200.00 | 200.00 | 200.00 | 0.00 | 335.15 | 166.94 | 163.20 | 148.84 | 0.00 | 2021-22ನೇ ಸಾಲಿನಿಂದ ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚವನ್ನು ಆರ್ಥಿಕ ಇಲಾಖೆಯ ಸೂಚನೆಯಂತೆ ಸ್ಥಗಿತಗೊಳಿಸಲಾಗಿದೆ. |

| ಕ್ರ ಸಂ. | ಇಲಾಖೆಯಿಂದ ಕೈಗೊಂಡಿರುವ ವಿವಿಧ ಕಾರ್ಯಕ್ರಮಗಳು | ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಖರ್ಚಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಬಿಡುಗಡೆಗೊಳಿಸಿರುವ ಅನುದಾನದಲ್ಲಿ ಕೈಗೊಳ್ಳಲಾದ ಕ್ರಮದ ಮಾಹಿತಿ |
|---|---|---|---|---|---|---|---|---|---|---|---|---|
| | | 2017-18 | 2018-19 | 2019-20 | 2020-21 | 2021-22 | 2017-18 | 2018-19 | 2019-20 | 2020-21 | 2021-22 | |
| 11 | ಅಂಗನವಾಡಿಗಳ ನಿರ್ವಹಣೆ 2235-02-102-0-40 (CSS: SS - 60:40) | 0.00 | 0.00 | 2471.00 | 1979.00 | 4250.00 | 0.00 | 0.00 | 2302.04 | 1952.64 | 4213.17 | ರಾಜ್ಯ ವಲಯ ಕಾರ್ಯಕ್ರಮದಡಿ ಅಂಗನವಾಡಿ ಕಟ್ಟಡಗಳ ನಿರ್ವಹಣೆ ಯೋಜನೆಯಡಿ ದುರಸ್ತಿ / ನಿರ್ವಹಣೆ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. |
| 12 | ನಗರ ಅಂಗನವಾಡಿಗಳ ಮೇಲ್ದರ್ಜೆಕರಣ 2235-02-102-0-44 | 0.00 | 0.00 | 225.00 | 300.00 | 307.89 | 0.00 | 0.00 | 61.92 | 129.68 | 173.18 | ನಗರ ಪ್ರದೇಶಗಳಲ್ಲಿ ಜನ ಸಾಂದ್ರತೆ ಹೆಚ್ಚಾಗಿರುವುದರಿಂದ ಐಸಿಡಿಎಸ್ ವ್ಯಾಪ್ತಿಗೆ ಒಳಪಡದೆ ಇರುವ ಪ್ರದೇಶಗಳಲ್ಲಿರುವ ಎಲ್ಲಾ ಫಲಾನುಭವಿಗಳಿಗೆ ಐಸಿಡಿಎಸ್ ಯೋಜನೆಯ ಸೇವೆಗಳನ್ನು ತಲುಪಿಸುವ ನಿಟ್ಟಿನಲ್ಲಿ ನಗರ ಪ್ರದೇಶಗಳಲ್ಲಿ ಹೆಚ್ಚುವರಿಯಾಗಿ 2017-18ನೇ ಸಾಲಿಗೆ 100 ಕೊಳಗೇರಿ ಅಂಗನವಾಡಿ ಕೇಂದ್ರಗಳು, 2018-19ನೇ ಸಾಲಿನಲ್ಲಿ 250 ನಗರ ಪ್ರದೇಶಗಳಲ್ಲಿ ಹಾಗೂ 2019-20ನೇ ಸಾಲಿಗೆ 100 ನಗರ ಪ್ರದೇಶದ ಅಂಗನವಾಡಿ ಕೇಂದ್ರಗಳನ್ನು ಒಳಗೊಂಡಂತೆ ಒಟ್ಟು 450 ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲು ರಾಜ್ಯ ಸರ್ಕಾರದಿಂದ ಆಡಳಿತಾತ್ಮಕ ಮಂಜೂರಾತಿ ದೊರೆತಿರುತ್ತದೆ. ಸದರಿ 450 ಅಂಗನವಾಡಿ ಕೇಂದ್ರಗಳು ನಗರ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. ಸದರಿ ಯೋಜನೆಯಡಿ ಅಂಗನವಾಡಿ ಕೇಂದ್ರಗಳನ್ನು ಶಿಶುಪಾಲನಾ ಕೇಂದ್ರಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗಿದೆ. |
| 13 | ಮಾತೃಶ್ರೀ ಯೋಜನೆ 2235-02-103-0-58 | 0.00 | 8250.00 | 23500.00 | 0.00 | 0.00 | 0.00 | 516.72 | 7824.29 | 0.00 | 0.00 | 2020-21 ನೇ ಸಾಲಿನಿಂದ ಮಾತೃಶ್ರೀ ಯೋಜನೆಯನ್ನು ಆರ್ಥಿಕ ಇಲಾಖೆಯ ಸೂಚನೆಯಂತೆ ಸ್ಥಗಿತಗೊಳಿಸಲಾಗಿದೆ. |
| 14 | ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಮರಣ ಪರಿಹಾರ ನಿಧಿ 2235-02-103-0-99-100 | 60.00 | 60.00 | 100.00 | 100.00 | 75.00 | 59.79 | 58.11 | 177.46 | 99.22 | 74.89 | ಅಂಗನವಾಡಿ ಕಾರ್ಯಕರ್ತೆ ಹಾಗು ಸಹಾಯಕಿಯರು ಸಮಗ್ರ ಶಿಶು ಅಭಿವೃದ್ಧಿ ಯೋಜನೆಗಳಲ್ಲಿ ಗೌರವ ಸೇವೆಯ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿದ್ದಾರೆ. ಅಂಗನವಾಡಿ ಕಾರ್ಯಕರ್ತೆಯರು / ಸಹಾಯಕಿಯರು ಸೇವೆಯಲ್ಲಿರುವಾಗ ಮರಣ ಹೊಂದಿದಲ್ಲಿ ಅವರ ಕುಟುಂಬದವರಿಗೆ ಪರಿಹಾರವನ್ನು ಮತ್ತು ತೀವ್ರತರವಾದ ಖಾಯಿಲೆಗಳಿಂದ ನರಳುತ್ತಿದ್ದಲ್ಲಿ ಅವರ ಕುಟುಂಬದ ಕಾನೂನುಬದ್ಧ ವಾರಸುದಾರರಿಗೆ ರೂ.50,000/- ನೀಡಲಾಗುತ್ತಿದೆ. ಕನಿಷ್ಠ ಒಂದು ವರ್ಷ ಸೇವೆ ಪೂರೈಸಿರುವ ಕಾರ್ಯಕರ್ತೆಯರು/ಸಹಾಯಕಿಯರು ಈ ಆರ್ಥಿಕ ಸಹಾಯಕ್ಕೆ ಅರ್ಹರಿರುತ್ತಾರೆ. |
| 15 | ಅಂಗನವಾಡಿ ಕಾರ್ಯಕರ್ತೆಯರಿಗೆ ನೂತನ ಪಿಂಚಣಿ ವ್ಯವಸ್ಥೆ 2235-60-103-0-01 | 1512.00 | 1299.76 | 1000.00 | 1000.00 | 1000.00 | 1432.22 | 1299.76 | 1000.00 | 1000.00 | 1000.00 | ಈ ಯೋಜನೆಯಡಿ 18-55 ವರ್ಷದ ಅಂ.ಕಾರ್ಯಕರ್ತೆ/ಅಂ. ಸಹಾಯಕಿಯರಿಂದ ಕ್ರಮವಾಗಿ ರೂ.150 ಹಾಗೂ ರೂ.84 ಮಾಹೆಯಾನ ವಂತಿಗೆಯಲ್ಲಿ ಪಡೆದು ವಸೂಲಿ ಮಾಡಿ ಅಷ್ಟೇ ಮೊತ್ತದ ವಂತಿಗೆಯನ್ನು ಸರ್ಕಾರ ಭರಿಸುತ್ತದೆ. |
| 16 | ಅಂಗನವಾಡಿ ಕಟ್ಟಡಗಳ ನಿರ್ಮಾಣ (ಆರ್ಐಡಿಎಫ್-ನಬಾರ್ಡ್) 4235-02-102-0-01-436 | 4415.00 | 1154.27 | 0.00 | 5000.00 | 4479.00 | 4389.64 | 1154.27 | 0.00 | 5000.00 | 4479.00 | ಅಂಗನವಾಡಿ ಕೇಂದ್ರ ನಡೆಸಲು ಕಟ್ಟಡದ ತೀವ್ರ ಅವಶ್ಯಕತೆಯನ್ನು ಮನಗಂಡು ನಬಾರ್ಡ್ ಸಂಸ್ಥೆಯು ಕಟ್ಟಡ ಕಟ್ಟಲು ಸಾಲದ ರೂಪದಲ್ಲಿ ಆರ್ಥಿಕ ನೆರವನ್ನು ನೀಡುತ್ತಿದೆ. ನಬಾರ್ಡ್ ಸಂಸ್ಥೆಯು ಶೇಕಡ 85ರಷ್ಟು ಪಾಲನ್ನು ಕಟ್ಟಡ ನಿರ್ಮಾಣಕ್ಕಾಗಿ ನೀಡುತ್ತದೆ ಹಾಗೂ ಉಳಿದ ಶೇಕಡ 15 ರಷ್ಟನ್ನು ರಾಜ್ಯ ಸರ್ಕಾರವು ನೀಡುತ್ತದೆ.<br>1) 2017-18ನೇ ಸಾಲಿನಲ್ಲಿ 471 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ.<br>2) 2018-19ನೇ ಸಾಲಿನಲ್ಲಿ 125 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ.<br>3)2020-21ನೇ ಸಾಲಿನಲ್ಲಿ 306 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ.<br>4) 2021-22ನೇ ಸಾಲಿನಲ್ಲಿ 271 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ. |

| ಕ್ರ ಸಂ. | ಇಲಾಖೆಯಿಂದ ಕೈಗೊಂಡಿರುವ ವಿವಿಧ ಕಾರ್ಯಕ್ರಮಗಳು | ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಖರ್ಚಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಬಿಡುಗಡೆಗೊಳಿಸಿರುವ ಅನುದಾನದಲ್ಲಿ ಕೈಗೊಳ್ಳಲಾದ ಕ್ರಮದ ಮಾಹಿತಿ |
|---|---|---|---|---|---|---|---|---|---|---|---|---|
| | | 2017-18 | 2018-19 | 2019-20 | 2020-21 | 2021-22 | 2017-18 | 2018-19 | 2019-20 | 2020-21 | 2021-22 | |
| 17 | ಅಂಗನವಾಡಿ ಕಟ್ಟಡಗಳು ವಿಶೇಷ ಅಭಿವೃದ್ಧಿ ಯೋಜನೆ 4235-02-102-0-02-133 | 3596.40 | 3600.00 | 3597.50 | 10765.00 | 2000.00 | 3590.82 | 3598.00 | 3597.50 | 10765.00 | 2000.00 | ಪ್ರಾದೇಶಿಕ ಅಸಮಾನತೆಯ ಬಗ್ಗೆ ನಂಜುಂಡಪ್ಪ ವರದಿಯಲ್ಲಿ 114 ಹಿಂದುಳಿದ/ಅತಿ ಹಿಂದುಳಿದ /ಅತ್ಯಂತ ಹಿಂದುಳಿದ ತಾಲ್ಲೂಕುಗಳನ್ನು ಗುರುತಿಸಲಾಗಿದೆ. ವಿಶೇಷ ಅಭಿವೃದ್ಧಿ ಕಾರ್ಯಕ್ರಮದಡಿಯಲ್ಲಿ ಈ ತಾಲ್ಲೂಕುಗಳ/ಜಿಲ್ಲೆಗಳಲ್ಲಿ ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕಾಗಿ ಆದ್ಯತೆ ನೀಡಲಾಗುತ್ತಿದೆ.<br>1) 2017-18ನೇ ಸಾಲಿನಲ್ಲಿ 333 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ.<br>2) 2018-19ನೇ ಸಾಲಿನಲ್ಲಿ 92 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ.<br>3) 2019-20ನೇ ಸಾಲಿನಲ್ಲಿ 207 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ.<br>4) 2020-21ನೇ ಸಾಲಿನಲ್ಲಿ 400 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ.<br>5) 2021-22ನೇ ಸಾಲಿನಲ್ಲಿ 400 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ. |
| 18 | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ 4235-02-102-0-05 | 47.00 | 0.00 | 0.00 | 332.00 | 45.33 | 46.36 | 0.00 | 0.00 | 330.00 | 45.33 | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತವನ್ನು ಇಲಾಖೆಯ ಬಂಡಾವಳ ಲೆಕ್ಕ ಶೀರ್ಷಿಕೆಯಡಿ ಒದಗಿಸಲಾಗುವುದು. ಸದರಿ ಅನುದಾನದಲ್ಲಿ ಅನುಮೋದನೆಗೊಂಡ ಕ್ರಿಯಾ ಯೋಜನೆಗೆ ಅನುಗುಣವಾಗಿ ಎಸ್.ಸಿ. ಮತ್ತು ಎಸ್.ಟಿ. ಹೆಚ್ಚಿನ ಜನಸಂಖ್ಯೆ ಇರುವ ಪ್ರದೇಶಗಳಲ್ಲಿ ಅಂಗನವಾಡಿ ಕಟ್ಟಡಗಳ ನಿರ್ಮಿಸಲು ಕ್ರಮವಹಿಸಲಾಗುವುದು.<br>1) 2017-18ನೇ ಸಾಲಿನಲ್ಲಿ 8 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ.<br>2) 2020-21 ನೇ ಸಾಲಿನಲ್ಲಿ 19 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ.<br>3) 2021-22ನೇ ಸಾಲಿನಲ್ಲಿ 9 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ. |
| 19 | ಅಂಗನವಾಡಿ ಕಟ್ಟಡಗಳ ನಿರ್ಮಾಣ (ಐ.ಸಿ.ಡಿ.ಎಸ್. – ನರೇಗ) 4235-02-102-0-06 | 5912.00 | 685.68 | 375.00 | 500.00 | 500.00 | 5781.77 | 684.79 | 370.00 | 500.00 | 500.00 | ಅಂಗನವಾಡಿ ಕೇಂದ್ರಗಳ ನಿರ್ಮಾಣಕ್ಕಾಗಿ ನರೇಗಾ ಸಹಯೋಗದೊಂದಿಗೆ ಪ್ರತಿ ಕಟ್ಟಡಕ್ಕೆ ರೂ.10.00 ಲಕ್ಷ ಘಟಕ (ನರೇಗಾದ ಪಾಲು ರೂ.5.00 ಲಕ್ಷ, ರಾಜ್ಯದ ಪಾಲು ರೂ. 5.00 ಲಕ್ಷ) ಕಟ್ಟಡ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು.<br>1) 2017-18ನೇ ಸಾಲಿನಲ್ಲಿ 3000 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ.<br>2) 2019-20ನೇ ಸಾಲಿನಲ್ಲಿ 75 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ.<br>3) 2020-21ನೇ ಸಾಲಿನಲ್ಲಿ 100 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ.<br>4) 2021-22ನೇ ಸಾಲಿನಲ್ಲಿ 100 ಅಂಗನವಾಡಿ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆ. |
| 20 | ಅಂಗನವಾಡಿ ಕಟ್ಟಡ ನಿರ್ವಹಣೆ ಮತ್ತು ದುರಸ್ತಿ 2211-00-102-0-61 (TP) | 2475.06 | 2649.00 | 2465.00 | 2500.00 | 2500.00 | 2305.29 | 2333.49 | 1601.28 | 2500.00 | 2500.00 | ಸದರಿ ಯೋಜನೆಯು ತಾಲ್ಲೂಕು ಪಂಚಾಯತ್ ಕಾರ್ಯಕ್ರಮವಾಗಿದ್ದು, ಸದರಿ ಯೋಜನೆಯಡಿ ಕ್ರಿಯಾ ಯೋಜನೆಯನ್ನು ತಾಲ್ಲೂಕು ಪಂಚಾಯತ್‌ನಿಂದ ಅನುಮೋದನೆ ಪಡೆದು ಅನುಷ್ಠಾನಗೊಳಿಸಲಾಗುತ್ತಿದೆ. |
| 21 | ಅಂಗನವಾಡಿ ಕಟ್ಟಡಗಳ ಉನ್ನತೀಕರಣ 4235-02-102-1-03-125 | 17.00 | 1409.40 | 1749.40 | 0.00 | 0.00 | 0.00 | 1409.40 | 1643.78 | 0.00 | 0.00 | ಕೇಂದ್ರ ಸರ್ಕಾರದಿಂದ ಬಿಡುಗಡೆಗೊಳಿಸಲಾದ ಅನುದಾನಕ್ಕೆ ಅನುಗುಣವಾಗಿ ರಾಜ್ಯ ಸರ್ಕಾರದ ಪಾಲಿನ ಅನುದಾನವನ್ನು ಬಿಡುಗಡೆಗೊಳಿಸಿ ವೆಚ್ಚ ಭರಿಸಲಾಗುತ್ತದೆ. |

| ಕ್ರ ಸಂ. | ಇಲಾಖೆಯಿಂದ ಕೈಗೊಂಡಿರುವ ವಿವಿಧ ಕಾರ್ಯಕ್ರಮಗಳು | ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಖರ್ಚಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಬಿಡುಗಡೆಗೊಳಿಸಿರುವ ಅನುದಾನದಲ್ಲಿ ಕೈಗೊಳ್ಳಲಾದ ಕ್ರಮದ ಮಾಹಿತಿ |
|---|---|---|---|---|---|---|---|---|---|---|---|---|
| | | 2017-18 | 2018-19 | 2019-20 | 2020-21 | 2021-22 | 2017-18 | 2018-19 | 2019-20 | 2020-21 | 2021-22 | |
| 22 | ಸ್ತ್ರೀಶಕ್ತಿ ಯೋಜನೆ 2235-02-103-0-41 | 7500.00 | 1382.48 | 854.29 | 506.23 | 8523.04 | 7320.00 | 1224.64 | 703.47 | 466.78 | 8300.05 | 1) ಗುಂಪು/ಒಕ್ಕೂಟಗಳಿಗೆ ಪ್ರಶಸ್ತಿ, ಸ್ತ್ರೀಶಕ್ತಿ ಗುಂಪಿನ ಸದಸ್ಯರಿಗೆ ಕೌಶಲ್ಯಾಭಿವೃದ್ಧಿ ತರಬೇತಿ, ಒಕ್ಕೂಟಗಳ ರಚನೆ, ಒಕ್ಕೂಟದ ಪದಾಧಿಕಾರಿಗಳಿಗೆ ಸಾಮರ್ಥ್ಯಾಬಿವೃದ್ಧಿ ತರಬೇತಿ ಮತ್ತು ಮಹಿಳಾ ಸಮಾಖ್ಯ ಕಾರ್ಯಕ್ರಮಕ್ಕೆ ಅನುದಾನ ಬಿಡುಗಡೆ, ಅಂತರಾಳ ಸಂಚಿಕೆ ಬಿಡುಗಡೆ. ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಗುಂಪುಗಳಿಗೆ ಸುತ್ತುನಿಧಿ, ಪ್ರೋತ್ಸಾಹಧನ, ಬಡ್ಡಿ ಸಹಾಯಧನ, ಸ್ತ್ರೀಶಕ್ತಿ ಸಮಾವೇಶ, ಒಕ್ಕೂಟ ತರಬೇತಿ, ಸಾಕ್ಷ್ಯ ಚಿತ್ರಗಳ ನಿರ್ಮಾಣ, ಅಂತರಾಳ ಸಂಚಿಕೆ ಬಿಡುಗಡೆ, ಸರಸ್ ಮೇಳದಲ್ಲಿ ಮಳಿಗೆ ಸ್ಥಾಪನೆ, 2) 2021-22ನೇ ಸಾಲಿನಲ್ಲಿ ಭಾರತ ಸ್ವಾತಂತ್ರ್ಯದ 75ನೇ ಅಮೃತ ಮಹೋತ್ಸವದ ಅಂಗವಾಗಿ ಅಮೃತ ಸ್ವ-ಸಹಾಯ ಕಿರು ಉದ್ದಿಮೆ ಯೋಜನೆಯಡಿ 7500 ಸ್ವ-ಸಹಾಯ ಗುಂಪುಗಳಿಗೆ ತಲಾ ರೂ.1.00 ಲಕ್ಷ ಬೀಜಧನದಂತೆ ರೂ.75.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ. |
| 23 | ತಾಲ್ಲೂಕು ಸ್ತ್ರೀಶಕ್ತಿ ಭವನ ನಿರ್ಮಾಣ 4235-02-103-1-02-386 | 25.00 | 0.00 | 0.00 | 0.00 | 0.00 | 25.00 | 0.00 | 0.00 | 0.00 | 0.00 | ಬಾಗಲಕೋಟೆ ಜಿಲ್ಲೆಯ ರಬಕವಿ ತಾಲ್ಲೂಕು ಸ್ತ್ರೀಶಕ್ತಿ ಭವನ ನಿರ್ಮಾಣಕ್ಕಾಗಿ |
| 24 | ಸ್ವಸಹಾಯ ಸಂಘಗಳು ಮತ್ತು ಗೊಂಚಲು ತರಬೇತಿ ಕೇಂದ್ರಗಳ ನಿರ್ಮಾಣ 4235-02-103-1-04 | 50.00 | 20.00 | 20.00 | 0.00 | 0.00 | 50.00 | 10.00 | 20.00 | 0.00 | 0.00 | ಮೈಸೂರು ವಿಭಾಗೀಯ ಮಟ್ಟದ ತರಬೇತಿ ಕೇಂದ್ರದ ಮುಂದುವರೆದ ಕಾಮಗಾರಿ |
| 25 | ಸಾಂತ್ವನ ಯೋಜನೆ 2235-02-103-0-99 (100) | 959.32 | 726.00 | 1380.00 | 1200.00 | 778.12 | 933.01 | 723.62 | 1256.57 | 1195.00 | 486.61 | ಸಮಾಜದಲ್ಲಿ ವರದಕ್ಷಿಣೆ ಕಿರುಕುಳ, ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರಕ್ಕೊಳಗಾದ ಮಹಿಳೆಯರಿಗೆ ಕಾನೂನು ನೆರವು ಹಾಗೂ ಸಮಾಲೋಚನೆಯನ್ನು ಒದಗಿಸಲಾಗುತ್ತಿದೆ. ಪ್ರಸ್ತುತ 178 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. |
| 26 | ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006 2235-02-103-0-52 | 293.00 | 566.49 | 723.50 | 706.67 | 541.00 | 288.00 | 566.49 | 701.20 | 636.57 | 500.41 | ಕುಟುಂಬದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ ಉಂಟಾದಾಗ, ನ್ಯಾಯಾಲಯದ ಮುಖಾಂತರ ಮಹಿಳೆಯರಿಗೆ ಆರ್ಥಿಕ ಪರಿಹಾರ, ರಕ್ಷಣಾ ಆದೇಶ, ವಾಸದ ಆದೇಶ, ಮಕ್ಕಳ ವಶ, ತಾತ್ಕಾಲಿಕ ಆಶ್ರಯ, ವೈದ್ಯಕೀಯ ಹಾಗೂ ಕಾನೂನು ನೆರವನ್ನು ಒದಗಿಸಲು ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ಹಾಗೂ ನಿಯಮ 2006ನ್ನು ಅನುಷ್ಠಾನಗೊಳಿಸಲಾಗುತ್ತಿದೆ. |
| 27 | ಟ್ರಾನ್ಸಿಟ್ ಹಾಸ್ಟೆಲ್ ಯೋಜನೆ 2235-02-103-0-99 (100) | - | - | 1.00 | - | - | - | - | 0.45 | - | - | ಉದ್ಯೋಗ, ಸಂದರ್ಶನ, ಪ್ರವೇಶ ಪರೀಕ್ಷೆ ಹಾಗೂ ಇನ್ನಿತರೆ ಕೋರ್ಸ್ ಗಳ ಪ್ರವೇಶ ಪರೀಕ್ಷೆಗಳಿಗೆ ಹಾಜರಾಗಲು ಬೆಂಗಳೂರಿಗೆ ಬರುವ ಮಹಿಳೆಯರಿಗೆ ಸುರಕ್ಷಿತ ಆಶ್ರಯ, ರಕ್ಷಣೆ ಹಾಗೂ ಇನ್ನಿತರ ಅಂಶಗಳನ್ನು ಪರಿಗಣಿಸಿ ರಾಜ್ಯ ಸರ್ಕಾರದಿಂದ ಒಟ್ಟು 11 ಟ್ರಾನ್ಸಿಟ್ ಹಾಸ್ಟೆಲ್‌ಗಳನ್ನು ಪ್ರಾರಂಭಿಸಲಾಗಿದೆ. ಸದರಿ ಹಾಸ್ಟೆಲ್ ಗಳಲ್ಲಿ 3 ದಿನಗಳವರೆಗೆ ಉಳಿದುಕೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಉಚಿತ ಉಪಹಾರ, ಭದ್ರತಾ ವ್ಯವಸ್ಥೆ, ಇತ್ಯಾದಿ ಸೌಲಭ್ಯ ದೊರೆಯುತ್ತದೆ. |

| ಕ್ರ ಸಂ. | ಇಲಾಖೆಯಿಂದ ಕೈಗೊಂಡಿರುವ ವಿವಿಧ ಕಾರ್ಯಕ್ರಮಗಳು | ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಖರ್ಚಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಬಿಡುಗಡೆಗೊಳಿಸಿರುವ ಅನುದಾನದಲ್ಲಿ ಕೈಗೊಳ್ಳಲಾದ ಕ್ರಮದ ಮಾಹಿತಿ |
|---|---|---|---|---|---|---|---|---|---|---|---|---|
| | | 2017-18 | 2018-19 | 2019-20 | 2020-21 | 2021-22 | 2017-18 | 2018-19 | 2019-20 | 2020-21 | 2021-22 | |
| 28 | ಸ್ವಾಧಾರಗೃಹ : 2235-02-103-0-64 | 442.84 | 274.35 | 694.42 | 454.75 | 721.19 | 426.99 | 0.00 | 660.87 | 454.75 | 721.19 | ಸಂಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ಆಶ್ರಯ, ಆಹಾರ, ಬಟ್ಟೆ, ತರಬೇತಿ ಹಾಗೂ ಶಿಕ್ಷಣ ನೀಡುವುದರ ಮೂಲಕ ಆರ್ಥಿಕವಾಗಿ, ಸಾಮಾಜಿಕವಾಗಿ ಸಶಕ್ತರಾಗುವಂತೆ ಮಾಡುವುದು ಯೋಜನೆಯ ಉದ್ದೇಶ. ರಾಜ್ಯದಲ್ಲಿ ಪ್ರಸ್ತುತ 52 ಸ್ವಾಧಾರಗೃಹ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. |
| 29 | ರಾಜ್ಯ ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯಗಳ ನಿರ್ಮಾಣ ಯೋಜನೆ 2235-02-103-0-62 | 12.50 | - | - | - | 52.50 | 12.50 | - | - | - | 52.50 | ಈ ಯೋಜನೆಯಡಿ ಜಿಲ್ಲಾ ಕೇಂದ್ರಗಳಲ್ಲಿ 4,000 ಚದರಡಿ ನಿವೇಶನದಲ್ಲಿ 25 ಕೊಠಡಿಗಳುಳ್ಳ ಉದ್ಯೋಗಸ್ಥ ಮಹಿಳೆಯರ ವಸತಿ ಗೃಹ ನಿರ್ಮಾಣ ಮಾಡಲು ಮಾರ್ಗಸೂಚಿಯಲ್ಲಿ ಅವಕಾಶ ಕಲ್ಪಿಸಲಾಗಿದ್ದು, ಕಟ್ಟಡ ನಿರ್ಮಾಣಕ್ಕಾಗಿ ಇಲಾಖೆಯ ವತಿಯಿಂದ ರೂ.25.00 ಲಕ್ಷಗಳ ಅನುದಾನ ನೀಡಲಾಗುವುದು. 5 ವಸತಿನಿಲಯಗಳ ಕಟ್ಟಡ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡಲಾಗಿದೆ. |
| 30 | ಸಖಿ-ಒನ್ ಸ್ಟಾಪ್ ಸೆಂಟರ್ (ಕೇಂದ್ರ-100%) 2235-02-102-0-42 | 91.15 | 593.94 | 582.54 | 729.08 | 513.89 | 47.53 | 84.13 | 393.49 | 698.59 | 757.66 | ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ಅಂದರೆ, ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು ಹಾಗೂ ಸಮಾಲೋಚನೆ ವ್ಯವಸ್ಥೆಗಳನ್ನು ಒದಗಿಸಲು ಭಾರತ ಸರ್ಕಾರವು ಮೊದಲನೇ ಹಂತದಲ್ಲಿ ದೇಶಾದ್ಯಂತ ಜಿಲ್ಲೆಗಳಲ್ಲಿ ಒನ್ ಸ್ಟಾಪ್ ಸೆಂಟರ್‌ನ್ನು ಸ್ಥಾಪಿಸಲು ಉದ್ದೇಶಿಸಿರುತ್ತದೆ. ಅದರಂತೆ, ಪ್ರಸ್ತುತ 30 ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. |
| 31 | ಭಾಗ್ಯಲಕ್ಷ್ಮಿಯೋಜನೆ 2235-02-102-0-25 | 30193.00 | 29443.00 | 29442.00 | 6800.00 | 11080.00 | 30189.90 | 29427.46 | 29442.00 | 4681.68 | 9725.98 | ಭಾಗ್ಯಲಕ್ಷ್ಮಿ ಯೋಜನೆಯಡಿ ನೋಂದಣಿಯಾದ ಫಲಾನುಭವಿಗಳಿಗೆ ಭಾಗ್ಯಲಕ್ಷ್ಮಿ ಬಾಂಡ್/ಪಾಸ್‌ಬುಕ್‌ಗಳನ್ನು ವಿತರಿಸಲಾಗಿದೆ. |
| 32 | ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ನಿವಾರಣೆ ಯೋಜನೆ 2235-02-102-0-24 | 50.00 | 50.00 | 30.00 | 30.00 | 30.00 | 45.95 | 50.00 | 29.88 | 16.97 | 28.35 | ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ನಿವಾರಣೆ ವ್ಯವಸ್ಥಿತ ಪಿಡುಗನ್ನು ನಿಯಂತ್ರಿಸಲು ಅರಿವು ಮೂಡಿಸುವ ಕಾರ್ಯಕ್ರಮವಾಗಿರುತ್ತದೆ. ಇದಕ್ಕಾಗಿ, ಕ್ರಮಬದ್ಧ ಕಾರ್ಯವಿಧಾನದ ಮಾರ್ಗಸೂಚಿಗಳನ್ನು ಮುದ್ರಿಸಿ 30 ಜಿಲ್ಲೆಗಳಿಗೆ ರವಾನಿಸಲಾಗಿರುತ್ತದೆ. ದೂರದರ್ಶನ ಮತ್ತು ಆಕಾಶವಾಣಿ ಮೂಲಕ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. |
| 33 | ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ 2235-02-102-0-27 | 44.00 | 44.00 | 30.00 | 30.00 | 30.00 | 40.85 | 43.82 | 25.36 | 21.72 | 23.09 | 6-18 ವರ್ಷದ ವಯೋಮಿತಿಯೊಳಗಿನ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಇತರರ ಜೀವ ಉಳಿಸಲು ಶ್ರಮಿಸುವ ಬಾಲಕರನ್ನು ಹೊಯ್ಸಳ ಪ್ರಶಸ್ತಿಗೆ ಮತ್ತು ಬಾಲಕಿಯರನ್ನು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಆಯ್ಕೆ ಮಾಡಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಈ ಪ್ರಶಸ್ತಿಯು ರೂ.10,000/-ಗಳ ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. |
| 34 | ಮಕ್ಕಳ ದಿನಾಚರಣೆ 2235-02-102-0-99-100 | 20.00 | 45.00 | 15.00 | 15.00 | 5.00 | 20.00 | 15.00 | 7.75 | 5.72 | 5.00 | ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ನಿರತವಾಗಿರುವ ಕನಿಷ್ಠ 5 ವರ್ಷಗಳ ಕಾಲ ನಿರಂತರವಾಗಿ ಸೇವೆ ಸಲ್ಲಿಸಿದ 4 ಸಂಸ್ಥೆಗಳನ್ನು ಹಾಗೂ 4 ವ್ಯಕ್ತಿಗಳನ್ನು ಸನ್ಮಾನಿಸಲು ರಾಜ್ಯ ಪ್ರಶಸ್ತಿಯನ್ನು ಮಕ್ಕಳ ದಿನಾಚರಣೆಯಂದು ನೀಡಲಾಗುವುದು. |
| 35 | ಉಜ್ವಲ ಯೋಜನೆ 2235-02-103-0-67 | 335.72 | 320.00 | 100.00 | 205.00 | 250.40 | 256.52 | 186.43 | 68.58 | 183.01 | 250.40 | ಸಾಗಾಣಿಕೆಗೆ ಒಳಗಾದವರಿಗೆ ಮೂಲಭೂತ ಸೌಲಭ್ಯ, ಆಶ್ರಯ, ಆಹಾರ, ವಸ್ತ್ರ, ಸಮಾಲೋಚನೆ ಒಳಗೊಂಡಂತೆ ವೈದ್ಯಕೀಯ ಸೌಲಭ್ಯ, ಕಾನೂನಿನ ನೆರವುಮತ್ತು ಮಾರ್ಗದರ್ಶನ ಹಾಗೂ ವೃತ್ತಿ ತರಬೇತಿ ಸೇರಿದಂತೆ ತಕ್ಷಣ ಮತ್ತು ದೀರ್ಘಕಾಲಿಕ ಪುನರ್ವಸತಿ ಸೇವೆಯನ್ನು ಒದಗಿಸಲಾಗುವುದು. |

| ಕ್ರ ಸಂ. | ಇಲಾಖೆಯಿಂದ ಕೈಗೊಂಡಿರುವ ವಿವಿಧ ಕಾರ್ಯಕ್ರಮಗಳು | ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಖರ್ಚಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಬಿಡುಗಡೆಗೊಳಿಸಿರುವ ಅನುದಾನದಲ್ಲಿ ಕೈಗೊಳ್ಳಲಾದ ಕ್ರಮದ ಮಾಹಿತಿ |
|---|---|---|---|---|---|---|---|---|---|---|---|---|
| | | 2017-18 | 2018-19 | 2019-20 | 2020-21 | 2021-22 | 2017-18 | 2018-19 | 2019-20 | 2020-21 | 2021-22 | |
| 36 | ಬೇಟಿ ಬಚಾವೋ ಬೇಟಿ ಪಡಾವೋ 2235-02-102-0-41 | 32.50 | 125.00 | 125.00 | 125.00 | 120.00 | 32.51 | 82.44 | 97.71 | 106.51 | 12.00 | ಹೆಣ್ಣು ಮಕ್ಕಳ ಲಿಂಗಾನುಪಾತವನ್ನು ಉತ್ತಮಗೊಳಿಸಿ, ಹೆಣ್ಣುಮಕ್ಕಳಿಗೆ ಉತ್ತಮ ಶಿಕ್ಷಣವನ್ನು ನೀಡುವುದು ಉದ್ದೇಶವಾಗಿದ್ದು, ಈ ಯೋಜನೆಯಡಿ ಅರಿವು ಮೂಡಿಸುವ ಕಾರ್ಯಕ್ರವನ್ನು ಹಮ್ಮಿಕೊಳ್ಳಲಾಗುವುದು (ಬೀದಿನಾಟಕ, ಜಾಥಾ, ಹೆಣ್ಣುಮಕ್ಕಳ ದಿನಾಚರಣೆ ಮುಂತಾದವು) |
| 37 | ಬಾಲ್ಯವಿವಾಹ ನಿಷೇಧ ಅನುಷ್ಠಾನ ಕಾರ್ಯಕ್ರಮ 2235-02-001-0-01(051) | 150.00 | 150.00 | 150.00 | 175.00 | 100.00 | 103.51 | 149.92 | 134.06 | 0.08 | 98.53 | ಬಾಲ್ಯವಿವಾಹ ನಿಷೇಧ ಉಸ್ತುವಾರಿ ಕೋಶದಡಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br>1) ಬಾಲ್ಯವಿವಾಹ ನಿಷೇಧ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ದೂರದರ್ಶನ, ಆಲ್ ಇಂಡಿಯಾ ರೇಡಿಯೋ ಮೂಲಕ ಹಮ್ಮಿಕೊಳ್ಳಲಾಗಿದೆ.<br>2) NFHS ಸರ್ವೆ ಪ್ರಕಾರ ಬಾಲ್ಯವಿವಾಹ ಹೆಚ್ಚಾಗಿರುವ 9 ಜಿಲ್ಲೆಗಳಲ್ಲಿ ಹಾಗೂ ಉಳಿದ 17 ಜಿಲ್ಲೆಗಳಲ್ಲಿಯೂ 1 ತಿಂಗಳವರೆಗೆ ಬಾಲ್ಯವಿವಾಹ ನಿಷೇಧ ಕಾಯ್ದೆಯ ಕುರಿತು ಬಸ್ ಬ್ರ್ಯಾಂಡಿಗ್ ಮೂಲಕ ಅರಿವು ಮೂಡಿಸಲಾಗಿದೆ.<br>3) ಪಿಂಕಥಾನ್ ಕಾರ್ಯಕ್ರಮದ ಅನುಷ್ಠಾನ<br>4) ಜನಸಾಮಾನ್ಯರಲ್ಲಿ ಅರಿವು ಮೂಡಿಸಲು ಬಾಲ್ಯವಿವಾಹ ನಿಷೇಧ ಕುರಿತು ಗೋಡೆ ಬರಹ ಬರೆಸಲಾಗಿದೆ.<br>5) ಬಾಲ್ಯವಿವಾಹ ನಿಷೇಧ ಕುರಿತಂತೆ ರಾಜ್ಯದ ಜಿಲ್ಲೆಗಳಲ್ಲಿ ಪ್ರೌಢಶಾಲಾ ಮುಖ್ಯೋಪಾಧ್ಯಾಯರು, ಪದವಿ ಪೂರ್ವ ಮತ್ತು ಹಾಸ್ಟೆಲ್‌ಗಳ ವಾರ್ಡನ್‌ಗಳಿಗೆ ಅರಿವು ಕಾರ್ಯಕ್ರಮ ಕೈಗೊಳ್ಳಲಾಗಿದ.<br>6) ಬಾಲ್ಯವಿವಾಹ ನಿಷೇಧ ಕುರಿತು ಜಿಲ್ಲೆಗಳ ತಾಲ್ಲೂಕು ಮಟ್ಟದ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮ ಕೈಗೊಳ್ಳಲಾಗಿದೆ.<br>7) ಬಾಗಲಕೋಟೆ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಬಾಲ್ಯವಿವಾಹಗಳು ಹೆಚ್ಚಾಗಿ ನಡೆಯುವ ಪ್ರದೇಶ/ ಗ್ರಾಮಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಕೈಗೊಳ್ಳಲಾಗಿದೆ.<br>8) ಬಾಲ್ಯವಿವಾಹ ನಿಷೇಧದ ಬಗ್ಗೆ ರಾಜ್ಯಾದ್ಯಂತ ಆಂದೋಲನದ ರೂಪದಲ್ಲಿ "ಬಾಲ್ಯವಿವಾಹ ನಿಷೇಧ ಅಭಿಯಾನ" ಎಂಬ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ವಾರ್ತಾ ಮತ್ತು ಸಂಪರ್ಕ ಇಲಾಖೆಯ ಸಹಯೋಗದೊಂದಿಗೆ "ವಿಡಿಯೋ ಆನ್ ವಿಲ್ಸ್" ವಾಹನಗಳ ಮೂಲಕ 788 ಹೋಬಳಿಗಳಲ್ಲಿ 3000 ಪ್ರದರ್ಶನಗಳನ್ನು ಮತ್ತು 7 ಬಿಬಿಎಂಪಿ ವಲಯಗಳಲ್ಲಿ 350 ಪ್ರದರ್ಶನಗಳನ್ನು ಏರ್ಪಡಿಸುವ ಮೂಲಕ ವ್ಯಾಪಕ ಪ್ರಚಾರ ನೀಡಿ ಅರಿವು ಮೂಡಿಸಲಾಗಿದೆ. ಇದಲ್ಲದೆ ಮಾನವ ಸರಪಳಿ ನಿರ್ಮಾಣ, ಸಹಿ ಕ್ಯಾಂಪೇನ್, ಪ್ರತಿಜ್ಞಾ ಸ್ವೀಕಾರದ ಮೂಲಕ ಬಾಲ್ಯ ವಿವಾಹ ತಡೆಕುರಿತು ಜಾಗೃತಿ ಮೂಡಿಸಲು ಕ್ರಮವಹಿಸಲಾಗಿದೆ. |

| ಕ್ರ ಸಂ. | ಇಲಾಖೆಯಿಂದ ಕೈಗೊಂಡಿರುವ ವಿವಿಧ ಕಾರ್ಯಕ್ರಮಗಳು | ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಖರ್ಚಾದ ಅನುದಾನ (ರೂ.ಲಕ್ಷಗಳಲ್ಲಿ) | | | | | ಬಿಡುಗಡೆಗೊಳಿಸಿರುವ ಅನುದಾನದಲ್ಲಿ ಕೈಗೊಳ್ಳಲಾದ ಕ್ರಮದ ಮಾಹಿತಿ |
|---|---|---|---|---|---|---|---|---|---|---|---|---|
| | | 2017-18 | 2018-19 | 2019-20 | 2020-21 | 2021-22 | 2017-18 | 2018-19 | 2019-20 | 2020-21 | 2021-22 | |
| 38 | ಸ್ವೀಕಾರ ಕೇಂದ್ರ ಹಾಗೂ ರಾಜ್ಯ ಮಹಿಳಾ ನಿಲಯ: 2235-02-106-0-06 | 637.00 | 704.50 | 758.50 | 778.82 | 835.52 | 564.83 | 703.05 | 682.35 | 676.97 | 762.22 | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ, ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956ರ ಅಡಿಯಲ್ಲಿ ನ್ಯಾಯಾಲಯದಿಂದ ಪ್ರಕರಣವನ್ನು ದಾಖಲಿಸಿ ಕಳುಹಿಸಲ್ಪಟ್ಟ ಮಹಿಳೆಯರಿಗಾಗಿ, ಪಾಲನೆ ಮತ್ತು ರಕ್ಷಣೆ ಅಗತ್ಯವಿರುವ 18 ವರ್ಷ ಮೇಲ್ಪಟ್ಟ ಸ್ವ-ಇಚ್ಛೆಯಿಂದ/ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ/ ಯಾವುದೇ ವ್ಯಕ್ತಿಗಳ ಮುಖಾಂತರ ದಾಖಲಾದ ಮಹಿಳೆಯರ ತಾತ್ಕಾಲಿಕ ಪುನರ್ವಸತಿಗಾಗಿ 4 ಸ್ವೀಕಾರ ಕೇಂದ್ರಗಳು (ಬೆಂಗಳೂರು, ತುಮಕೂರು, ಗದಗ ಹಾಗೂ ಕಾರವಾರ) ಮತ್ತು ದೀರ್ಘಾವಧಿ ಪುನರ್ವಸತಿಗಾಗಿ ರಾಜ್ಯದಲ್ಲಿ 8 ರಾಜ್ಯ ಮಹಿಳಾ ನಿಲಯಗಳು (ಬೆಂಗಳೂರು, ಬಳ್ಳಾರಿ, ದಾವಣಗೆರೆ, ಧಾರವಾಡ, ಕಲಬುರ್ಗಿ, ಮೈಸೂರು, ಶಿವಮೊಗ್ಗ, ಮತ್ತು ಉಡುಪಿ) ಕಾರ್ಯನಿರ್ವಹಿಸುತ್ತಿವೆ. ಈ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಆಶ್ರಯ, ರಕ್ಷಣೆ, ಪೌಷ್ಠಿಕ ಆಹಾರ, ವೈದ್ಯೋಪಚಾರ, ಕೌಶಲ್ಯಾಭಿವೃದ್ಧಿ ತರಬೇತಿ ಮತ್ತು ವೃತ್ತಿ ತರಬೇತಿ ನೀಡುವುದರ ಮೂಲಕ ಉದ್ಯೋಗಾವಕಾಶ ಮತ್ತು ಸ್ವ-ಉದ್ಯೋಗಾವಕಾಶ ಕಲ್ಪಿಸಲಾಗುತ್ತಿದೆ. |
| 39 | ಸುಧಾರಣಾ ಸಂಸ್ಥೆಗಳ ಕಟ್ಟಡ ನಿರ್ಮಾಣ: 4235-02-106-1-01-139 | 300.00 | 300.00 | 300.00 | 50.00 | 50.00 | 300.00 | 300.00 | 300.00 | 36.54 | 50.00 | 2017-18ನೇ ಸಾಲಿನಲ್ಲಿ ಮೈಸೂರು ಕೊಡಗು ಬಳ್ಳಾರಿ, ಉಡುಪಿ ಚಿಕ್ಕಮಗಳೂರು; 2018-19ರಲ್ಲಿ ಬೆಂಗಳೂರು ನಗರ ಬನಶಂಕರಿ ನಿವೇಶನದ ಕಂದಾಯ, ತುಮಕೂರು, ದಾವಣಗೆರೆ, ಮೈಸೂರು, ದ.ಕನ್ನಡ, ಮಡಿಕೇರಿ, ಉ.ಕನ್ನಡ, ಬಳ್ಳಾರಿ, ಉಡುಪಿ; 2019-20ರಲ್ಲಿ ಬೆಂಗಳೂರು, ತುಮಕೂರು; 2020-21ರಲ್ಲಿ ಮಾಸ್ಟರ್ ಪ್ಲಾನ್ ತಯಾರಿಸಲು ಹಾಗೂ ತುಮಕೂರು ಜಿಲ್ಲಾಕಛೇರಿಗಳ ಕಟ್ಟಡಗಳ ನಿರ್ಮಾಣಕ್ಕಾಗಿ ಹಾಗೂ 2021-22ರಲ್ಲಿ ಸ್ವೀಕಾರ ಕೇಂದ್ರ, ಉ.ಕನ್ನಡ ಸಂಸ್ಥೆಯ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆಗೊಳಿಸಲಾಗಿದೆ. |
| 40 | ಸುಧಾರಣಾ ಸಂಸ್ಥೆಗಳ ದುರಸ್ತಿ ಹಾಗೂ ನಿರ್ವಹಣೆ: 2235-02-106-0-05-132 | 50.00 | 55.00 | 20.00 | 0.00 | 0.00 | 54.70 | 55.00 | 20.00 | 0.00 | 0.00 | 2017-18 ನೇ ಸಾಲಿನಲ್ಲಿ ಚಿತ್ರದುರ್ಗ, ಧಾರವಾಡ, ಕಲಬುರ್ಗಿ, ಉ.ಕನ್ನಡ, 2018-19ರಲ್ಲಿ ಬೆಂಗಳೂರು, ಧಾರವಾಡ, ತುಮಕೂರು, 2019-20ರಲ್ಲಿ ದಾವಣಗೆರೆ, ಧಾರವಾಡ, ಚಿಕ್ಕಮಗಳೂರು ಜಿಲ್ಲೆಗಳ ಉಪನಿರ್ದೇಶಕರ ಕಛೇರಿ ಹಾಗೂ ರಾಜ್ಯ ಮಹಿಳಾ ನಿಲಯ/ಸ್ವೀಕಾರ ಕೇಂದ್ರ ಕಟ್ಟಡ ನಿರ್ಮಾಣಕ್ಕಾಗಿ ಬಳಸಲಾಗಿದೆ. |
| 41 | ಬಾಲಕಿಯರ ವಸತಿ ನಿಲಯ: 2235-02-103-0-99-100 | 410.23 | 475.00 | 509.45 | 257.20 | 495.00 | 407.04 | 474.68 | 501.17 | 251.70 | 359.11 | ಗ್ರಾಮಂತರ ಹಾಗೂ ಹಿಂದುಳಿದ ಪ್ರದೇಶಗಳ ತಾಲ್ಲೂಕುಗಳ ಹೆಣ್ಣುಮಕ್ಕಳ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಲು ಹಾಗೂ ಶಾಲೆ ಬಿಡುವುದನ್ನು ತಪ್ಪಿಸಲು ಅನುಕೂಲವಾಗುವಂತೆ ಇಲಾಖಾವತಿಯಿಂದ ಬಾಲಕಿಯರ ವಸತಿ ನಿಲಯಗಳನ್ನು ಸ್ವಯಂಸೇವಾ ಸಂಸ್ಥೆಗಳ ಮೂಲಕ ವಿದ್ಯಾರ್ಥಿನಿಯರಿಗೆ ವಸತಿ ಮತ್ತು ಭೋಜನ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಪ್ರಸ್ತುತ ಮೆಟ್ರಿಕ್ ಪೂರ್ವ 19 ಮತ್ತು ಮೆಟ್ರಿಕ್ ನಂತರ 18 ಒಟ್ಟು 37 ನಿಲಯಗಳು ಒಟ್ಟು 19 ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. |

ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು.